# ಸಕಲೇಶಪುರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವ ನ್ಯಾಯಾಲಯದಲ್ಲಿ

## ಸಿ.ಸಿ. ನಂ. 199/2022

| | | |
|---|---|---|
| ಸಾಕ್ಷಿದಾರರ ಹೆಸರು | ಇಮ್ರಾನ್ ಶರೀಫ್ | P.W-3 |
| ತಂದೆಯ / ಗಂಡನ ಹೆಸರು | ಮುನಾವರ್ | C.W-3 |
| ವಯಸ್ಸು | 39 ವರ್ಷ | |
| ಉದ್ಯೋಗ | ವ್ಯಾಪಾರ | |
| ವಾಸ ಸ್ಥಳ | ಕುಶಾಲನಗರ ಬಡಾವಣೆ, ಸಕಲೇಶಪುರ | ದಿನಾಂಕ 12-11-2025 |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ**

ನನಗೆ ಚಾಸಾ 2 ರವರು ಪರಿಚಯವಿರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಿಪಿ 2 ಮಹಜರ್ ನಲ್ಲಿ ಇರುವ ಸಹಿ ನನ್ನದೇ ಇರುತ್ತದೆ. ಸಾಕ್ಷಿಯ ಸಹಿಯನ್ನು ನಿಪಿ 2(ಸಿ) ಎಂದು ಗುರುತಿಸಲಾಯಿತು. ನಿಪಿ 2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಾನು ನಿಪಿ 2 ರ ದಾಖಲೆಯನ್ನು ಓದಿ ನೋಡಿರುವುದಿಲ್ಲ. ಪೊಲೀಸರು ನನಗೆ ಓದಿ ಹೇಳಿರುವುದಿಲ್ಲ. ನನ್ನ ಜೊತೆ ನಿಪಿ 2 ರ ದಾಖಲೆಗೆ ಬೇರೆ ಯಾರೂ ಸಹಿ ಮಾಡಿರುವುದಿಲ್ಲ. ನಿಪಿ 2 ರ ದಾಖಲೆಗೆ ನಾನು ಸಕಲೇಶಪುರ ನಗರ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಪೊಲೀಸರು ಯಾವುದೇ ಸ್ವತ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಮಹಜರ್ ಪೂರ್ವದಲ್ಲಿ ಪೊಲೀಸರು ನನಗೆ ಯಾವುದೇ ನೋಟೀಸ್ ನೀಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)

**ಪಾಟೀ ಸವಾಲುಃ ಮಾನ್ಯ ಸ.ಸ.ಅ ರವರಿಂದಃ-**

ದಿನಾಂಕಃ 15-01-2022 ರಂದು ಮಹಜರ್ ಗೆ ಹಾಜರಾಗುವಂತೆ ಪೊಲೀಸರು ನನಗೆ ನೋಟೀಸ್ ನೀಡಿದ್ದರು ಎಂದರೆ ಸರಿಯಲ್ಲ. ಆ ಮೇರೆಗೆ ನಾನು ಮತ್ತು ಚಾಸಾ 2 ರವರು ದಿಃ 15-01-2022 ರಂದು ಬೆಳಗ್ಗೆ 9.00 ರಿಂದ 10.00 ರ ವರೆಗೆ ಮಹಜರ್ ಕಾಲದಲ್ಲಿ ಹಾಜರಿದ್ದೆವು ಎಂದರೆ ಸರಿಯಲ್ಲ. ನನ್ನ ಮತ್ತು ಚಾಸಾ 2 ರವರ ಸಮಕ್ಷಮ ಪೊಲೀಸರು ನಿಪಿ 2 ರಂತೆ ಮಹಜರ್ ಮಾಡಿ, 40 ಕೆ ಜಿ ತೂಕದ ಗೋಮಾಂಸವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಪೊಲೀಸರ ಮುಂದೆ ದಿಃ 16-01-2022 ರಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ಹೇಳಿಕೆಯನ್ನು ನಿಪಿ 4 ಎಂದು ಗುರುತಿಸಲಾಯಿತು. ನಿಪಿ 2 ಮತ್ತು 4 ರಲ್ಲಿ ಬರೆದಿರುವ ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸಇ ಒ

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ ಎಂ ಎಫ್ ಸಿ , ಸಕಲೇಶಪುರ

ಸಾಕ್ಷಿಯ ಸಹಿ